CC

Commencement Certificate

ದೂರವಾಣಿ : 77-262 22
ಫ್ಯಾಕ್ಸ್ : 77-262 23

# ನೆಲಮಂಗಲ ಯೋಜನಾ ಪ್ರಾಧಿಕಾರ

ಬಿ. ಹೆಚ್. ರಸ್ತೆ, ಸುಭಾಷ್ ನಗರ, ನೆಲಮಂಗಲ - 562 123

**ಪ್ರಾರಂಭಿಕ ಪ್ರಮಾಣ ಪತ್ರ**

*(ನಮೂನೆ-3)*

ನೆಲಮಂಗಲ ಯೋಜನಾ ಪ್ರಾಧಿಕಾರ ಕಾರ್ಯಾಲಯ
ಬಿ. ಹೆಚ್. ರಸ್ತೆ, ಸುಭಾಷ್ ನಗರ
ನೆಲಮಂಗಲ - 562 123

*ಸಂಖ್ಯೆ:ನೆಂಯೋಪ್ರಾ/ಎಲ್ಎಒ/30/2005-06*

*ದಿನಾಂಕ:* 6 DEC 2005

ವಿಷಯ:ಬೆಂಗಳೂರು ಉತ್ತರ ತಾಲ್ಲೂಕು, ದಾಸನಪುರ ಹೋಬಳಿ, ನಗರೂರು ಗ್ರಾಮದ ಸ ನಂ. 30, 3, 36/1, 36/2, 37, 39/2ಎ, 40, 41, 42,43, 44, 60, 63, 64/1, 64/2, 65/1ಎ, 65/2ಬಿ, 65/3, 66 ರ ಲ್ಲಿ 50 ಎಕರೆ -29 1/2ಗುಂಟೆ ವಿಸ್ತೀರ್ಣದ ಜಮೀನಿನಲ್ಲಿ ವಸತಿ ವಿನ್ಯಾಸ ನಕ್ಷೆಗೆ ಅನುಮೋದನೆ ನೀಡುವ ಬಗ್ಗೆ.

ಉಲ್ಲೇಖ 1) ಅರ್ಜಿದಾರರ ಅರ್ಜಿ ದಿನಾಂಕ :12-08-2005, 12-09-2005 ಮತ್ತು 2-11-2005 ಹಾಗೂ 5-12-2005
2) ದಿನಾಂಕ :27-09- 2005 ರಂದು ನಡೆದ ಪ್ರಾಧಿಕಾರದ ಸಭೆಯ ವಿಷಯ ಸಂಖ್ಯೆ 06ರ ನಿರ್ಣಯ.
3) ಅರ್ಜಿದಾರರು ಶುಲ್ಕ ಪಾವತಿಸಿದ ದಿನಾಂಕ:29-11-2005
4) ತಹಸೀಲ್ದಾರ್,ನೆಲಮಂಗಲ ತಾಲ್ಲೂಕು ಇವರ ಪತ್ರ ಸಂ.ಎಎಲ್ಎನ್/ಸಿಆರ್(ಎನ್)/23/2005-06 ದಿನಾಂಕ:30-11-2005.
5) ಅರ್ಜಿದಾರರ ಪರಿತ್ಯಾಜನಾ ಪತ್ರ ದಿನಾಂಕ: 05-12-2005.

************

ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (2)ರ ಪ್ರಾಧಿಕಾರದ ಸಭೆಯ ನಿರ್ಣಯದಂತೆ *ಬೆಂಗಳೂರು* ಉತ್ತರ ತಾಲ್ಲೂಕು ದಾಸನಪುರ ಹೋಬಳಿ, *:ಬೆಂಗಳೂರು ಉತ್ತರ* ತಾಲ್ಲೂಕು, ದಾಸನಪುರ ಹೋಬಳಿ, ನಗರೂರು ಗ್ರಾಮದ ಸ ನಂ. 30, 3, 36/1, 36/2, 37, 39/2ಎ, 40, 41, 42,43, 44, 60, 63, 64/1, 64/2, 65/1ಎ, 65/2ಬಿ, 65/3, 66 ರ ಲ್ಲಿ 50 ಎಕರೆ - 29 1/2ಗುಂಟೆ ವಿಸ್ತೀರ್ಣದ ಜಮೀನಿನಲ್ಲಿ ವಸತಿ ವಿನ್ಯಾಸ ನಕ್ಷೆಗೆ ಅನುಮೋದಿಸಲು ತೀರ್ಮಾನಿಸಲಾಗಿದೆ. ಅರ್ಜಿದಾರರು ಉಲ್ಲೇಖ (3)ರಲ್ಲಿ ಶುಲ್ಕಗಳನ್ನು ಪಾವತಿಸಿದ್ದು, ಉಲ್ಲೇಖ(4) ರಲ್ಲಿ ತಹಸೀಲ್ದಾರ್, ಬೆಂಗಳೂರು ಉತ್ತರ ತಾಲ್ಲೂಕು ಇವರು ಸದರಿ ಜಮೀನಿನ ಚೆಕ್ಕುಬಂದಿ ಮತ್ತು ವಿಸ್ತೀರ್ಣವನ್ನು ವಿನ್ಯಾಸ ನಕ್ಷೆಯಲ್ಲಿ ದೃಢೀಕರಿಸಿರುತ್ತಾರೆ. ಹಾಗೂ ಸದರಿ ವಸತಿ ವಿನ್ಯಾಸದಲ್ಲಿರುವ ನಾಗರೀಕ ಸೌಲಭ್ಯ, ಉದ್ಯಾನವನ ಮತ್ತು ರಸ್ತೆಗಳ ಪ್ರದೇಶಗಳನ್ನು ಉಲ್ಲೇಖ (5)ರಲ್ಲಿನ ನೋಂದಾಯಿತ ಪರಿತ್ಯಾಜನಾ ಪತ್ರದ ಮೂಲಕ ಅರ್ಜಿದಾರರು ಪ್ರಾಧಿಕಾರಕ್ಕೆ ಹಸ್ತಾಂತರಿಸಿರುತ್ತಾರೆ. ಹಾಗಾಗಿ, ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಅಧಿನಿಯಮ ಪ್ರಕರಣ 17ರಡಿಯಲ್ಲಿ ಶ್ರೀ ಜಿ.ಪ್ರಸಾದ್ ರೆಡ್ಡಿ ಇವರಿಗೆ ವಸತಿ ವಿನ್ಯಾಸ ನಕ್ಷೆ ಅನುಮೋದನೆ ಬಗ್ಗೆ ಸಂಬಂಧಿಸಿದಂತೆ ಅಭಿವೃದ್ಧಿ ಕಾರ್ಯ ಪ್ರಾರಂಭಿಸಲು ಅನುಮತಿ ನೀಡಿ ಈ ಕೆಳಗಿನ ನಿಬಂಧನೆಗಳೊಡನೆ ನಕ್ಷೆಯನ್ನು ಅನುಮೋದಿಸಲಾಗಿದೆ.

1. ಈಗ ನೀಡಿರುವ ವಿನ್ಯಾಸ ಮಂಜೂರಾತಿಯ ಅವಧಿಯು ಮಂಜೂರಾತಿ ನೀಡಿದ ದಿನದಿಂದ ಎರಡು ವರ್ಷಗಳವರೆಗೆ ಮಾತ್ರ ಜಾರಿಯಲ್ಲಿರುತ್ತದೆ. ಈ ಅವಧಿಯಲ್ಲಿ ವಿನ್ಯಾಸದ ಅಭಿವೃದ್ಧಿ ಪೂರ್ಣಗೊಳ್ಳದಿದ್ದಲ್ಲಿ ವಿನ್ಯಾಸದ ಅನುಮತಿಯನ್ನು ನವೀಕರಿಸಿಕೊಳ್ಳತಕ್ಕದ್ದು.
2. ಅನುಮೋದಿತ ರೂಪರೇಖಾ ನಕ್ಷೆಯಂತೆ ವಿನ್ಯಾಸವನ್ನು ಜಮೀನಿನಲ್ಲಿ ಅಭಿವೃದ್ಧಿಪಡಿಸಿದ ನಂತರವೇ ಅಂದರೆ ರಸ್ತೆಯ ನಿರ್ಮಾಣ, ಒಳಚರಂಡಿ ವ್ಯವಸ್ಥೆ, ಕುಡಿಯುವ ನೀರಿನ ಸೌಕರ್ಯ, ವಿದ್ಯುತ್ ವ್ಯವಸ್ಥೆ ಇತ್ಯಾದಿಗಳನ್ನು ನಿರ್ಮಿಸಿದ ನಂತರ ಈ ಪ್ರಾಧಿಕಾರದ ಪರಿಶೀಲನೆಗಾಗಿ ತಿಳಿಸತಕ್ಕದ್ದು.
3. ವಿನ್ಯಾಸ ಪ್ರದೇಶವನ್ನು ಈ ಪ್ರಾಧಿಕಾರದ ಅನುಮೋದನೆ ನೀಡಿದ 24 ತಿಂಗಳ ಒಳಗಾಗಿ ಸಂಪೂರ್ಣವಾಗಿ (ಉದ್ಯಾನವನ, ನಾಗರೀಕ ಸೌಲಭ್ಯಕ್ಕೆ ಮೀಸಲಿಟ್ಟ ಜಾಗ, ರಸ್ತೆಗಳು, ಒಳಚರಂಡಿ ವ್ಯವಸ್ಥೆ, ನೀರಿನ ಸೌಕರ್ಯ, ವಿದ್ಯುತ್ ಸಂಪರ್ಕ) ಅಭಿವೃದ್ಧಿಪಡಿಸತಕ್ಕದ್ದು. ತಪ್ಪಿದ್ದಲ್ಲಿ ಈ ಅನುಮೋದನೆಯು ಯಾವ ಸೂಚನೆಯೂ ಇಲ್ಲದೆ ತಂತಾನೆ ರದ್ದಾಗುತ್ತದೆ.

4. ಪ್ರಸ್ತಾವಿತ ವಿನ್ಯಾಸದಲ್ಲಿ ಸೂಕ್ತವಾದ ಕಡೆ ಪ್ರಮಾಣೀಕೃತ ರೀತಿಯಲ್ಲಿ ಸೀವೇಜ್ ಟ್ರೀಟ್‌ಮೆಂಟ್ ಪ್ಲಾಂಟ್ ಅನ್ನು ಸ್ಥಾಪಿಸಬೇಕು ಮತ್ತು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ದಿನಾಂಕ: 08-07-2005 ರ ಪತ್ರದ ಸಂಖ್ಯೆ:98/KSPCB/BNG(N)/DEO/2/LAYOUT/CFF/1836/2005-06,100/KPCB/EO/N)DEO/ AEO-2/LAY0UT/CFE/2006/1837ದಿನಾಂಕ:8-7-2005,99,/KSCB/EO-BNG/(N)DEO/AEO-2/LAYOUT/CFF/2005-06/1838 ದಿನಾಂಕ:8-7-2005.ರಲ್ಲಿ ವಿಧಿಸಲಾದ ಎಲ್ಲಾ ಷರತ್ತುಗಳನ್ನು ಸನುಸರಿಸತಕ್ಕದ್ದು.
5. ವಿನ್ಯಾಸವನ್ನು ಕಾರ್ಯಗತಗೊಳಿಸುವ ಮೊದಲು ಕರ್ನಾಟಕ ಗ್ರಾಮ ಪಂಚಾಯಿತಿ ಕಾಯಿದೆಯಂತೆ ಅನುಮತಿ ಪಡೆಯತಕ್ಕದ್ದು.
6. ಅನುಮೋದಿತ ವಿನ್ಯಾಸದಲ್ಲಿ ಮಳೆ ನೀರು ಸಂಗ್ರಹಣೆಯನ್ನು ಕಡ್ಡಾಯವಾಗಿ ಅಳವಡಿಸುವುದು.
7. ಅನುಮೋದಿತ ವಿನ್ಯಾಸದಲ್ಲಿರುವ ರಸ್ತೆಗಳು, ಉದ್ಯಾನವನವನ್ನು ಸಂಪೂರ್ಣವಾಗಿ ಅಭಿವೃದ್ಧಿಪಡಿಸಿ ಈ ಪ್ರಾಧಿಕಾರದಿಂದ ತಿಳಿಸುವವರೆಗೆ ನಿರ್ವಹಣೆಯನ್ನು ಮಾಡತಕ್ಕದ್ದು. ಹಾಗೂ ಸಾರ್ವಜನಿಕ ಸೌಲಭ್ಯಕ್ಕೆ ಕಾಯ್ದಿರಿಸಿರುವ ಪ್ರದೇಶಗಳನ್ನು ಒತ್ತುವರಿಯಾಗದಂತೆ ಸಂರಕ್ಷಿಸತಕ್ಕದ್ದು.
8. ಈ ಪ್ರಾಧಿಕಾರದ ಪೂರ್ವಾನುಮತಿಯಿಲ್ಲದೆ ವಿನ್ಯಾಸದಲ್ಲಿ ಯಾವುದೇ ಬದಲಾವಣೆಯನ್ನು ಮಾಡಬಾರದು.
9. ಈ ಪ್ರದೇಶದಲ್ಲಿ ಹಾಲಿ ಇರುವ ಗಿಡಮರಗಳನ್ನು ಸಾಧ್ಯವಾದಷ್ಟು ಮಟ್ಟಿಗೆ ಉಳಿಸಿಕೊಳ್ಳತಕ್ಕದ್ದು ಮತ್ತು ರಸ್ತೆಗಳ ಎರಡೂ ಕಡೆ ಹಾಗೂ ಉದ್ಯಾನವನಗಳಲ್ಲಿ ಹೊಸ ಸಸ್ಯಗಳನ್ನು ಬೆಳೆಸಲು ಸೂಕ್ತ ಕ್ರಮ ಕೈಗೊಳ್ಳಬೇಕು.
10. ವಿನ್ಯಾಸದಲ್ಲಿನ ರಸ್ತೆಗಳಿಂದ ಅಕ್ಕಪಕ್ಕದ ಜಮೀನುಗಳಿಗೆ ಇರುವ ಸಂಪರ್ಕವನ್ನು ಯಾವುದೇ ಕಾರಣಕ್ಕೂ ನಿರ್ಬಂಧಿಸತಕ್ಕದ್ದಲ್ಲ.
11. ಈ ಅನುಮೋದನೆಯು ತಾಂತ್ರಿಕವಾಗಿರುವುದರಿಂದ, ಇದನ್ನು ಜಮೀನಿನ ಮೇಲಿರುವ ಹಕ್ಕನ್ನು ಅಥವಾ ಮಾಲೀಕತ್ವವನ್ನು ನಿರೂಪಿಸಲು ಉಪಯೋಗಿಸಲು ಬರುವುದಿಲ್ಲ.
12. ಜಮೀನಿಗೆ ಸಂಬಂಧಿಸಿದ ಯಾವುದೇ ಸಿವಿಲ್ ವ್ಯಾಜ್ಯಗಳಿಗೆ ಪ್ರಾಧಿಕಾರವು ಹೊಣೆಯಾಗುವುದಿಲ್ಲ.
13. ವಿನ್ಯಾಸ ಅಂಗೀಕಾರ ಕೋರಿಕೆ ಸಂಬಂಧ ಸಲ್ಲಿಸಲಾಗಿರುವ ದಾಖಲೆ ಅಥವಾ ಬೇರೆ ಯಾವುದೇ ಮಾಹಿತಿಗಳು ತಪ್ಪಾಗಿದ್ದಲ್ಲಿ ವಿನ್ಯಾಸಕ್ಕೆ ನೀಡಿರುವ ಅಂಗೀಕಾರ ತಾನೇ ತಾನಾಗಿ ರದ್ದುಗೊಳ್ಳುತ್ತದೆ.
14. ಮೇಲ್ಕಂಡ ಯಾವುದೇ ಷರತ್ತುಗಳನ್ನು ಹಾಗೂ ಇತರೆ ಯಾವುದೇ ಪ್ರಾಧಿಕಾರವು ವಿಧಿಸುವ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಪ್ರಾಧಿಕಾರವು ನೀಡಿರುವ ಮಂಜೂರಾತಿಯು ಕೂಡಲೇ ರದ್ದಾಗುವುದು. ಈ ವಿನ್ಯಾಸದಲ್ಲಿ ಬರುವ ನಿವೇಶನಗಳ ಮಾರಾಟ ಸಂಬಂಧ ನೀಡುವ ಪ್ರಚಾರದಲ್ಲಿ ಪ್ರಾಧಿಕಾರದಿಂದ ಅನುಮೋದನೆ ಆಗಿರುವ ಅನುಮೋದನೆ ಸಂಖ್ಯೆ ಮತ್ತು ದಿನಾಂಕವನ್ನು ಕಡ್ಡಾಯವಾಗಿ ನಮೂದಿಸತಕ್ಕದ್ದು.
15. ಅನುಮೋದಿತ ವಸತಿ ವಿನ್ಯಾಸದಲ್ಲಿನ ನಿವೇಶನಗಳನ್ನು ಸರ್ಕಾರಿ ಸುತ್ತೋಲೆ ಸಂಖ್ಯೆ. ನಅಇ 112 ಬೆರೂಪ್ರಾ 2005 ದಿನಾಂಕ: 26-05-2005 ರಲ್ಲಿನ ಮಾರ್ಗಸೂಚಿಯಂತೆ ಬಿಡುಗಡೆ ಮಾಡಿಸಿಕೊಳ್ಳತಕ್ಕದ್ದು.
16. ಈ ವಿನ್ಯಾಸದಲ್ಲಿ ಬರುವ ನಿವೇಶನಗಳ ಮಾರಾಟ ಸಂಬಂಧ ನೀಡುವ ಪ್ರಚಾರದಲ್ಲಿ ಪ್ರಾಧಿಕಾರದಿಂದ ಅನುಮೋದನೆ ಆಗಿರುವ ಅನುಮೋದನೆ ಸಂಖ್ಯೆ ಮತ್ತು ದಿನಾಂಕವನ್ನು ಕಡ್ಡಾಯವಾಗಿ ನಮೂದಿಸತಕ್ಕದ್ದು.

ಸಂಖ್ಯೆ:ನೆಂಯೋಪ್ರಾ/ಎಲ್ಎಒ/30/2005-06

ಮೇಲಿನಂತೆ ನೀಡಲಾಗಿರುವ ಅನುಮತಿಗೆ ವ್ಯತಿರಿಕ್ತವಾಗಿ ಅಭಿವೃದ್ಧಿ ಕಾಮಗಾರಿಯನ್ನು ಕೈಗೊಂಡಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಸೆಕ್ಷನ್ 17(4)ರಂತೆ ಕ್ರಮ ಕೈಗೊಳ್ಳಲು ಪ್ರಾಧಿಕಾರಕ್ಕೆ ಅವಕಾಶ ಇರುವುದನ್ನು ನಿಮ್ಮ ಗಮನಕ್ಕೆ ತರಲಾಗಿದೆ.

ಸದಸ್ಯ-ಕಾರ್ಯದರ್ಶಿ,
ನೆಲಮಂಗಲ ಯೋಜನಾ ಪ್ರಾಧಿಕಾರ,
ನೆಲಮಂಗಲ.

ಇವರಿಗೆ

ಕಾರ್ಯದರ್ಶಿಗಳುದಾಸನಪುರ ಗ್ರಾಮ ಪಂಚಾಯಿತಿ, ಬೆಂಗಳೂರು ಉತ್ತರ ತಾಲ್ಲೂಕು ಇವರಿಗೆ ಅನುಮೋದಿತ ವಸತಿ ವಿನ್ಯಾಸ ನಕ್ಷೆಯ 4 ಪ್ರತಿಗಳೊಂದಿಗೆ ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.

ಯಥಾ ಪ್ರತಿಯನ್ನು:-ಶ್ರೀ ಜಿ. ಪ್ರಸಾದ್ ರೆಡ್ಡಿ, ನಂ.14, 3ನೇ ಮಹಡಿ,ಕೃಷ್ಣ ಕಾಂಪ್ಲೆಕ್ಸ್, ಬೆಂಗಳೂರು-560 001.